ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಸಮಾಜದ ಕೆಳವರ್ಗದ ಸಮುದಾಯಗಳಿಗೆ ಉನ್ನತ ಶಿಕ್ಷಣದ ಲಭ್ಯತೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

605(814) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖಾಸಗಿ ಶಿಕ್ಷಣ ಸಂಸ್ಥೆಗಳು ಸಮಾಜದ ಕೆಲವೇ ವರ್ಗಗಳ ಮತ್ತು ಸಮುದಾಯಗಳ ಹಿಡಿತದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಮಾಜದ ಕೆಳವರ್ಗದ ಸಮುದಾಯಗಳಿಗೆ ಉನ್ನತ ಶಿಕ್ಷಣ ದೊರಕುವಂತಾಗಲು ಕ್ಯಾಪಿಟೇಷನ್ ನಿರ್ಮೂಲನೆಯಾಗದೆ ಕಡಿಮೆ ಭೋದನಾ ಶುಲ್ಕ ವಿಧಿಸುವುದು ಅವಶ್ಯಕವಲ್ಲವೆ;

(ಇ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಶಿಕ್ಷಣ ಹಣಕಾಸು ಸಂಸ್ಥೆಯೊಂದನ್ನು ಸ್ಥಾಪಿಸಿ ಉನ್ನತ ಶಿಕ್ಷಣ ಪಡೆಯಬಯಸುವ ವಿದ್ಯಾರ್ಥಿಗಳಿಗೆ ಸರಳ ಬಡ್ಡಿ ದರದಲ್ಲಿ ಸರಳ ನಿಬಂಧನೆಗಳೊಂದಿಗೆ ಸಾಲ ದೊರೆಯುವಂತೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ಮಾಹಿತಿ ನೀಡುವುದು)